# All India Radio : Bangalore

## Pradesha Samachara

## 01.03.2012 * 18.40 hrs

## ಆಕಾಶವಾಣಿ : ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ನಾಗರಿಕ ಸೇವೆಗಳ ಖಾತರಿ ಯೋಜನೆ ಪ್ರಾಯೋಗಿಕವಾಗಿ ರಾಜ್ಯದ ಐದು ಕಡೆ ಇಂದಿನಿಂದ ಜಾರಿ;

  11 ಇಲಾಖೆಯ 151 ಸೇವೆಗಳು ಈ ಯೋಜನೆಯಡಿ ಸಾರ್ವಜನಿಕರಿಗೆ ಲಭ್ಯ
- ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರ ಆರಂಭಕ್ಕೆ ಕ್ರಮ – ಬಿ.ಎನ್. ಬಚ್ಚೇಗೌಡ
- ರಸ್ತೆ ಸಂಚಾರ ನಿಯಮ ಉಲ್ಲಂಘನೆ ವಿರುದ್ಧ ಕಠಿಣ ಕ್ರಮಕ್ಕೆ ಕೇಂದ್ರ ಸಂಪುಟದ ಒಪ್ಪಿಗೆ.
- ರಾಷ್ಟ್ರೀಯ ಕೃಷಿ ವಿನೂತನ ಯೋಜನೆ ವಿಸ್ತರಣೆಗೆ ಕೇಂದ್ರದ ಅನುಮೋದನೆ .

*************

ರಾಜ್ಯ ಸರ್ಕಾರದ ಮಹಾತ್ವಕಾಂಕ್ಷಿ ಯೋಜನೆಯಲ್ಲೊಂದಾದ ಕರ್ನಾಟಕ ನಾಗರಿಕ ಸೇವೆಗಳ ಖಾತರಿ ನಿಯಮ ಕಾಯ್ದೆಗೆ ರಾಜ್ಯದ 5 ಕಡೆ ಏಕ ಕಾಲಕ್ಕೆ ಇಂದು ಚಾಲನೆ ನೀಡಲಾಯಿತು.

ಪೈಲಟ್ ಯೋಜನೆಯಡಿ ಬೆಂಗಳೂರಿನ ಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ನಡೆದ ಪ್ರಧಾನ ಸಮಾರಂಭದಲ್ಲಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಆಡಳಿತ ಯಂತ್ರವನ್ನು ಚುರುಕು ಗೊಳಿಸಿ ಪಾರದರ್ಶಕ ಕಾಯ್ದೆಯಡಿ ಕಾರ್ಯನಿರ್ವಹಿಸುವಂತೆ ಮಾಡುವುದು ಇದರ ಉದ್ದೇಶ ಎಂದು ಅವರು ಹೇಳಿದರು.

ರಾಜ್ಯದ ಆರೂವರೆ ಕೋಟಿ ಜನತೆಯ ಸಮಸ್ಯೆಗೆ ಈ ಕಾನೂನು ಪರಿಹಾರ ನೀಡಲಿದೆ ಎಂದು ಅವರು ಹೇಳಿದರು. ದೇಶದ 6 ರಾಜ್ಯಗಳಲ್ಲಿ ಈ ಯೋಜನೆ ಜಾರಿಗೆ ಬಂದಿದೆ 11 ಇಲಾಖೆಯ 151 ಸೇವೆಗಳನ್ನು ನೀಡುತ್ತಿರುವ ಏಕೈಕ ರಾಜ್ಯ ಕರ್ನಾಟಕ ಎಂದು ಮುಖ್ಯಮಂತ್ರಿ ಸದಾನಂದಗೌಡ ತಿಳಿಸಿದರು.

ಧಾರವಾಡಲ್ಲಿ ನಡೆದ ಸಮಾರಂಭದಲ್ಲಿ 700 ಅರ್ಜಿಗಳು ಬಂದಿದ್ದು ಅವುಗಳ ಬಹುತೇಕ ಅರ್ಜಿಗಳನ್ನು ಇತ್ಯರ್ಥ ಪಡಿಸಲಾಗಿದೆ ಎಂದು ಅವರು ತಿಳಿಸಿದರು. ಸಂಸದ ಅನಂತಕುಮಾರ್ ಮಾತನಾಡಿ ಕೇಂದ್ರ ಸರ್ಕಾರ ಈ ಯೋಜನೆಯನ್ನು

ಜಾರಿಗೆ ತರುವಂತೆ ಮುಂದಿನ ಸಂಸತ್ ಅಧಿವೇಶನದಲ್ಲಿ ಒತ್ತಾಯಿಸುವುದಾಗಿ ಹೇಳಿದರು.

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ವಿಧಾನಸಭೆಯ ಉಪಾಧ್ಯಕ್ಷ ಯೋಗೀಶ್ ಭಟ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಉತ್ತರದಾಯಿತ್ವ ಮತ್ತು ಪಾರದರ್ಶಕ ಆಡಳಿತ ಅನುಷ್ಠಾನಕ್ಕೆ ಆದ್ಯತೆ ನೀಡಲಾಗಿದೆ ಎಂದು ಹೇಳಿದರು.

*************

ನಾಗರಿಕರಿಗೆ ಉತ್ತಮ ಸೇವೆಗಳನ್ನು ನೀಡುವ ನಾಗರಿಕರ ಸೇವಾ ಖಾತರಿ ಕಾಯ್ದೆಯನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಅಧ್ಯಕ್ಷ ಟಿ. ರವಿಕುಮಾರ್ ಜನತೆಗೆ ಕರೆ ನೀಡಿದ್ದಾರೆ.

ಅವರು ಚಿತ್ರದುರ್ಗದಲ್ಲಿಂದು ರಾಜ್ಯ ಸರ್ಕಾರ ಜಾರಿಗೆ ತಂದಿರುವ ಕರ್ನಾಟಕ ನಾಗರಿಕ ಸೇವೆಗಳ ಖಾತರಿ ಅಧಿನಿಯಮ 2011ನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಪಾರದರ್ಶಕವಾಗಿ ನಿಗಧಿತ ಸಮಯದೊಳಗೆ ಕಾನೂನಿನಡಿ ನಾಗರಿಕರಿಗೆ ಕೆಲಸ ಮಾಡಿಕೊಡುವ ಈ ಯೋಜನೆ ನಾಗರಿಕರಿಗೆ ಒಂದು ವರದಾನವಾಗಿದೆ. ಅಧಿಕಾರಿಗಳ, ಚುನಾಯಿತ ಪ್ರತಿನಿಧಿಗಳು, ನಾಗರಿಕರು ಸಹಕರಿಸಿದಾಗ ಮಾತ್ರ ಈ ಯೋಜನೆ ಯಶಸ್ವಿಯಾಗಲು ಸಾಧ್ಯ ಎಂದರು.

*************

ಅಧಿಕಾರಿಗಳು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಬೇಜವಾಬ್ದಾರಿತನ ತೋರದೆ ಸಮರ್ಪಕವಾಗಿ ಕಾರ್ಯ ನಿರ್ವಹಿಸಬೇಕೆಂದು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಜಿ.ಎಸ್. ನಾರಾಯಣಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಅವರು ಚಿತ್ರದುರ್ಗದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಜಿಲ್ಲೆಯಲ್ಲಿ ನಾಗರಿಕ ಸೇವೆಗಳ ಖಾತ್ರಿ ಅಧಿನಿಯಮ ಜಾರಿಗೆ ಬಂದಿದೆ. ನಿಗಧಿತ ಅವಧಿಯೊಳಗೆ ಸಾರ್ವಜನಿಕರ ಕೆಲಸಗಳನ್ನು ಮಾಡಿಕೊಡಬೇಕು ಎಂದು ಅವರು ಹೇಳಿದರು.

*************

ನಾಗರಿಕ ಸೇವೆಗಳ ಖಾತರಿ ಅದಿನಿಯಮದಡಿ ಸರ್ಕಾರದ ಸೌಲಭ್ಯಗಳನ್ನು ಜನರ ಬಾಗಿಲಿಗೆ ಮುಟ್ಟಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಪಶು ಸಂಗೋಪನಾ ಸಚಿವ ರೇವುನಾಯಕ್ ಬೆಳಮಗಿ ಹೇಳಿದ್ದಾರೆ.

ಅವರು ಬೀದರ್ ಜಿಲ್ಲೆಯ ಔರಾದನಲ್ಲಿಂದು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಅಧಿಕಾರಿಗಳು ಜನಪರ ಸೇವೆಯನ್ನು ನಿಗಧಿತ ಅವಧಿಯೊಳಗೆ ಒದಗಿಸಬೇಕೆಂದು ಸೂಚಿಸಿದರು.

*************

ವಿಧಾನಸಭೆಯಲ್ಲಿ ಅಶ್ಲೀಲ ಚಿತ್ರ ವೀಕ್ಷಣೆ ಪ್ರಕರಣದ ಕುರಿತು ತನಿಖೆ ನಡೆಸಲು ನೇಮಕಮಾಡಿರುವ ಸದನ ಸಮಿತಿ ಮೂರನೇ ದಿನವಾದ ಇಂದು ವಿಚಾರಣೆ ನಡೆಸಿತು.

ಶಾಸಕ ಶ್ರೀಶೈಲಪ್ಪ ಬಿದರೂರ ಅಧ್ಯಕ್ಷತೆಯಲ್ಲಿ ಸಮಿತಿ, ತನಿಖಾ ವ್ಯಾಪ್ತಿ ಕುರಿತ ವಿಷಯಗಳ ಬಗ್ಗೆ ಸಮಾಲೋಚನೆ ನಡೆಸಿತು. ಮೂವರು ಮಾಜಿ ಸಚಿವರು ಸಭಾಧ್ಯಕ್ಷರಿಗೆ ನೀಡಿರುವ ಉತ್ತರದ ವಿವರ ಪರಾಮರ್ಶೆಯನ್ನು ಸಹ ಸದನ ಸಮಿತಿ ನಡೆಸಿತು.

ಖಾಸಗಿ ವಾಹಿನಿಗಳು ಚಿತ್ರೀಕರಣ ಮಾಡಿರುವ ವಿವರಗಳನ್ನು ಸಹ ಸದನ ಸಮಿತಿ ಪರಿಶೀಲನೆಗೆ ಗುರಿಪಡಿಸಿತು ಎಂದು ಸದನ ಸಮಿತಿಯ ಅಧ್ಯಕ್ಷ ಶ್ರೀಶೈಲಪ್ಪ ಬಿದರೂರ ನಂತರ ಸುದ್ದಿಗಾರರಿಗೆ ತಿಳಿಸಿದರು.

ಸಭಾಧ್ಯಕ್ಷರು ಬರುವ ಮಾರ್ಚ್ 13 ರಂದು ವರದಿನೀಡುವಂತೆ ಸೂಚಿಸಿದ್ದಾರೆ, ಆದರೆ ವರದಿ ನೀಡಲು ಒಂದು ವಾರ ಹೆಚ್ಚಿನ ಕಾಲಾವಕಾಶ ಕೋರುವ ಸಾಧ್ಯತೆಗಳಿವೆ ಎಂದು ಅವರು ಹೇಳಿದರು.

*************

ಆಡಳಿತರೂಢ ಬಿಜೆಪಿ ಸರ್ಕಾರದಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ, ಇದರ ವಿರುದ್ಧ ಕಾಂಗ್ರೆಸ್ ಪಕ್ಷ ಪ್ರತಿಪಕ್ಷವಾಗಿ ಸಮರ್ಪಕವಾಗಿ ಕಾರ್ಯನಿರ್ವಹಿಸಲು ವಿಫಲವಾಗಿದೆ ಎಂದು ಜೆಡಿಎಸ್ ರಾಜ್ಯಾಧ್ಯಕ್ಷ ಎಚ್‌ಡಿ ಕುಮಾರಸ್ವಾಮಿ ದೂರಿದ್ದಾರೆ.

ಅವರು ಚಿಕ್ಕಮಗಳೂರು ಜಿಲ್ಲೆಯ ತೆರೆಕೆರೆಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಉಪಚುನಾವಣೆಯಲ್ಲಿ ಕಾಂಗ್ರೆಸ್ ಬಿಜೆಪಿಯ ವಿರುದ್ಧ ಹೋರಾಟ ಮಾಡಲು ತಮ್ಮ ಪಕ್ಷದ ಅಭ್ಯರ್ಥಿಯನ್ನು ಕಣಕ್ಕೆ ಇಳಿಸಿದ್ದೇವೆಯೇ ಹೊರತು ಆಡಳಿತ ಪಕ್ಷಕ್ಕೆ ಬೆಂಬಲ ನೀಡಲು ಅಲ್ಲ ಎಂದು ಸ್ಪಷ್ಟ ಪಡಿಸಿದರು.

*************

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರಗಳನ್ನು ಖಾಸಗಿರವರ ಸಹಭಾಗಿತ್ವದಲ್ಲಿ ಆರಂಭಿಸಲು ಉದ್ದೇಶಿಸಲಾಗಿದೆ ಎಂದು ಕಾರ್ಮಿಕ ಸಚಿವ ಬಿ.ಎನ್. ಬಚ್ಚೇಗೌಡ ತಿಳಿಸಿದ್ದಾರೆ.

ಅವರು ಬಳ್ಳಾರಿಯಲ್ಲಿಂದು ರಾಜ್ಯದ 6ನೇ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದರು. ಯುವ ಜನತೆಗೆ ಇಂದಿನ ದಿನಗಳಲ್ಲಿ ಅಗತ್ಯವಾದ ಉದ್ಯೋಗವನ್ನು ನೀಡುವ ಮುನ್ನ ಕೌಶಲ್ಯ ತರಬೇತಿಯನ್ನು ನೀಡಲಾಗುತ್ತಿದೆ ಎಂದು ಹೇಳಿದರು.

ಮುಂದಿನ 5 ವರ್ಷಗಳಲ್ಲಿ 10 ಲಕ್ಷ ಯುವಕರಿಗೆ ಉದ್ಯೋಗ ನೀಡುವ ಯೋಜನೆಯನ್ನು ರಾಜ್ಯ ಸರ್ಕಾರ ಹಮ್ಮಿಕೊಂಡಿದೆ ಎಂದು ಹೇಳಿದರು. ಸಮಾರಂಭದಲ್ಲಿ ಸ್ಥಳೀಯ ಚುನಾಯಿತ ಪ್ರತಿನಿಧಿಗಳು ಹಾಜರಿದ್ದರು.

ರಾಜ್ಯ ಬಿಜೆಪಿಯಲ್ಲಿರುವ ಸಣ್ಣ ಪುಟ್ಟ ಗೊಂದಲಗಳಿಗೆ ನಾಳಿದ್ದು ದೆಹಲಿಯಲ್ಲಿ ನಡೆಯಲಿರುವ ಕೋರ್ ಸಮಿತಿ ಸಭೆಯಲ್ಲಿ ಚರ್ಚೆಮಾಡಿ ಪಕ್ಷದ ವರಿಷ್ಠರು ಪರಿಹಾರ ಕಂಡುಹಿಡಿಯಲಿದ್ದಾರೆ ಎಂದು ಸಭೆಯ ನಂತರ ಸಚಿವ ಬಚ್ಚೇಗೌಡ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದರು.

*************

ರಸ್ತೆ ಸಂಚಾರದ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲು ಮೋಟಾರ್ ವಾಹನ ಕಾಯ್ದೆಗೆ ತಿದ್ದುಪಡಿತರಲು ಕೇಂದ್ರ ಸಚಿವ ಸಂಪುಟ ಅನುಮೊದನೆ ನೀಡಿದೆ.

ವಾಹನಗಳನ್ನು ಚಲಿಸುವ ವೇಳೆ ಮೊಬೈಲ್ ಫೋನ್ ಬಳಸದಿರುವುದು, ಸೀಟ್ ಬೆಲ್ಟ್ ಹಾಗೂ ಹೆಲ್ಮೆಟ್ ಬಳಸದಿರುವುದು, ಸಂಚಾರಿ ದೀಪಗಳ ನಿಯಮ ಉಲ್ಲಂಘನೆ ವಿರುದ್ಧ ಕಠಿಣ ಕ್ರಮಕೈಗೊಳ್ಳಲು ಸಂಪುಟ ಒಪ್ಪಿಗೆ ನೀಡಿತು.

ಪದೇ ಪದೇ ಮೋಟಾರ್ ವಾಹನ ಕಾಯ್ದೆ ಉಲ್ಲಂಘನೆ ಮಾಡುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸುವುದರ ಜೊತೆಗೆ ದಂಡವನ್ನು ವಿಧಿಸುವುದಕ್ಕೆ ತಿದ್ದುಪಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಸರ್ಕಾರದ ಬಂಡವಾಳ ವಾಪಸಾತಿ ಕಾರ್ಯಕ್ರಮದ ಭಾಗವಾಗಿ ಸಾರ್ವಜನಿಕ ವಲಯದ ಉದ್ದಿಮೆಗಳ ಷೇರುಗಳನ್ನು ಮರುಖರೀದಿ ಮಾಡುವುದಕ್ಕೂ ಸಂಪುಟ ಸಭೆ ಒಪ್ಪಿಗೆ ನೀಡಿದೆ.

ರಾಷ್ಟ್ರೀಯ ಕೃಷಿ ವಿನೂತನ ಯೋಜನೆ – ಎನ್ಎಐಪಿ ಯನ್ನು 2014ರ ಜೂನ್ 30ರವರೆಗೆ ವಿಸ್ತರಿಸಲು ಸರ್ಕಾರಕ್ಕೆ ಸಲ್ಲಿಸಿದ್ದ ಕೃಷಿ ಸಚಿವಾಲಯ ಹಾಗೂ ಕೃಷಿ ಸಂಶೋಧನೆ ಹಾಗೂ ವಿಸ್ತರಣಾ ಶಿಕ್ಷಣ ಇಲಾಖೆಯ ಪ್ರಸ್ತಾವನೆಗೆ ಕೇಂದ್ರ ಸಂಪುಟ ಅನುಮೋದನೆ ನೀಡಿದೆ.

ಯಾವುದೇ ಹೆಚ್ಚುವರಿ ವೆಚ್ಚ ಮಾಡದೆ ಯೋಜನೆ ವಿಸ್ತರಣೆ ಅವಧಿಯಲ್ಲಿ ಯೋಜನೆಯಡಿ ಬಾಕಿ ಇರುವ 400 ಕೋಟಿ ರೂಪಾಯಿ ಬಳಕೆ ಮಾಡಬಹುದಾಗಿದೆ. ಯೋಜನೆಗೆ ಇದುವರೆಗೆ 800 ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ.

2012–13ನೇ ಸಾಲಿನ ಪೌಷ್ಟಿಕ ಆಧಾರಿತ ಸಬ್ಸಿಡಿ ದರ ನಿಗದಿಪಡಿಸುವ ಕುರಿತ ರಸಗೊಬ್ಬರ ಇಲಾಖೆಯ ಪ್ರಸ್ತಾವನೆಗೂ ಕೇಂದ್ರ ಸಂಪುಟ ಒಪ್ಪಿಗೆ ನೀಡಿದೆ.

*************

ಜಾಗತಿಕ ಹಿಂಜರಿಕೆಯ ನಡುವೆಯೂ ಕಳೆದ ಐದು ವರ್ಷಗಳಲ್ಲಿ ದೇಶದಲ್ಲಿ ನಿರುದ್ಯೋಗ ಪ್ರಮಾಣ ಶೇಕಡ 1.7 ರಷ್ಟು ತಗ್ಗಿದೆ. 2004–05ನೇ ಸಾಲಿನಲ್ಲಿ ಶೇಕಡ 8.3 ರಷ್ಟಿದ್ದ ನಿರುದ್ಯೋಗ ದರ 2009–10ನೇ ಸಾಲಿನಲ್ಲಿ 6.6ರಷ್ಟಾಗಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಎಂ. ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಜನರ ಉದ್ಯೋಗ ಯೋಜನೆಗಳಲ್ಲಿ ನಾವಿನ್ಯ ಕುರಿತ ಸಮಾವೇಶವನ್ನು ಉದ್ಘಾಟಿಸಿ ಮಾತನಾಡುತ್ತಿದ್ದ ಸಚಿವರು ಉದ್ಯೋಗ ಸೃಷ್ಟಿಗೆ ಸರ್ಕಾರ ಹಲವಾರು ಕ್ರಮ ಹಾಗೂ ನೀತಿಯನ್ನು ಕೈಗೊಳ್ಳುವ ಮೂಲಕ ಸಾಧನೆ ಮಾಡಲಾಗಿದೆ ಎಂದು ವಿವರಿಸಿದರು.

*************

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ರಾಜ್ಯಗಳು ಎಲ್ಲ ಬಗೆಯ ಗ್ರಾಮೀಣ ಕೆಲಸಗಳನ್ನು ಕೈಗೆತ್ತಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಕೇಂದ್ರ ಗ್ರಾಮೀಣ ಅಭಿವೃದ್ಧಿ ಸಚಿವ ಜಯರಾಂ ರಮೇಶ್ ಹೇಳಿದ್ದಾರೆ.

ಅವರು ಪಾಟ್ನಾದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿ ಗ್ರಾಮೀಣ ಬಡ ಜನತೆಗೆ ಉದ್ಯೋಗ ಖಾತ್ರಿಪಡಿಸುವುದು ಕೇಂದ್ರ ಸರ್ಕಾರದ ಮೂಲ ಉದ್ದೇಶವಾಗಿದೆ. ಆ ಹಿನ್ನೆಲೆಯಲ್ಲಿ ರಾಜ್ಯಗಳು ತಮ್ಮ ಗ್ರಾಮೀಣ ಮೂಲ ಸೌಕರ್ಯ ಅಗತ್ಯಗಳನ್ನು ಆಧರಿಸಿ ಕಾಮಗಾರಿ ಕೈಗೆತ್ತಿಕೊಳ್ಳಲು ಅವಕಾಶ ನೀಡಲಾಗಿದೆ ಎಂದರು.

ರಾಷ್ಟ್ರೀಯ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯ ವ್ಯಾಪ್ತಿಗೆ ಬಡತನ ರೇಖೆಗಿಂತ ಮೇಲಿನ ಕುಟುಂಬಗಳನ್ನು ಒಳಪಡಿಸಲು ಕೇಂದ್ರ ಸರ್ಕಾರ ತೀರ್ಮಾನಿಸಿದೆ ಎಂದು ಸಚಿವ ಜಯರಾಂ ರಮೇಶ್ ಹೇಳಿದರು.

12ನೇ ಪಂಚವಾರ್ಷಿಕ ಯೋಜನೆಯಲ್ಲಿ ಗ್ರಾಮೀಣ ಅಭಿವೃದ್ಧಿ ಇಲಾಖೆಗೆ ನೀಡುವ ಅನುದಾನದಲ್ಲಿ ಶೇಕಡ 50 ರಷ್ಟು ಹಣವನ್ನು ನೇರವಾಗಿ ರಾಜ್ಯಸರ್ಕಾರಗಳು ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ತಕ್ಕಂತೆ ವೆಚ್ಚಮಾಡಬಹುದಾಗಿದೆ ಎಂದು ಹೇಳಿದರು.

*************

ಸಂಕ್ಷಿಪ್ತ ಸುದ್ದಿಗಳು

- ಮೈಸೂರು ಅರಮನೆಯಲ್ಲಿ ಇನ್ನು ಮುಂದೆ ವಿದ್ಯುತ್ ದೀಪ ಅಲಾಂಕಾರ ವೀಕ್ಷಿಸಲು ಸಾರ್ವಜನಿಕರು 50 ಸಾವಿರ ರೂಪಾಯಿ ಹಣ ನೀಡಿದರೆ ಅರ್ಧಗಂಟೆಗಳ ಕಾಲ ವಿದ್ಯುತ್ ಅಲಂಕಾರ ನೋಡಲು ಅರಮನೆ ಆಡಳಿತ ಮಂಡಳಿ ಅವಕಾಶ ಕಲ್ಪಿಸಿಕೊಡಲಿದೆ ಎಂದು ಮಂಡಲಿ ಉಪನಿರ್ದೇಶಕರು ತಿಳಿಸಿದ್ದಾರೆ.
- ಗದಗ-ಬೆಟಗೇರಿ ಅವಳಿನಗರದ ನಿವಾಸಿಗಳಿಗೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಸಬೇಕೆಂದು ಒತ್ತಾಯಿಸಿ ಸಾರ್ವಜನಿಕರು ಪಾದಯಾತ್ರೆ ಮೂಲಕ ಇಂದು ಗದಗನಲ್ಲಿ ಪ್ರತಿಭಟನೆ ನಡೆಸಿದರು.
- ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪೌರ ಕಾರ್ಮಿಕರ 73 ಮಕ್ಕಳಿಗೆ ಸ್ಯಾನಿಟರಿ ಹೆಲ್ತ್‌ಇನ್ಸ್‌ಪೆಕ್ಟರ್ ಹುದ್ದೆಗೆ ಅಗತ್ಯವಿರುವ ತರಬೇತಿ ನೀಡಲಾಗಿದೆ, ಅ ಪೈಕಿ 67 ಅಭ್ಯರ್ಥಿಗಳ ತರಬೇತಿ

ಪೂರ್ಣಗೊಂಡಿದೆ. ಅವರಿಗೆ ಅರ್ಹತಾ ಪತ್ರವನ್ನು ನಾಡಿದ್ದು ಮೈಸೂರಿನಲ್ಲಿ ಮುಖ್ಯಮಂತ್ರಿಯವರು ನೀಡಲಿದ್ದಾರೆ ಎಂದು ಮೇಯರ್ ಪುಷ್ಪಲತಾ ಚಿಕ್ಕಣ್ಣ ತಿಳಿಸಿದ್ದಾರೆ.

************